**Akashvani : Bangalore**
**National Bulletin In Kannada**
**28.04.2025 / 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**28.04.2025 / 13.10 hrs**

**<><*<><>*><>**

ಮುಖ್ಯಾಂಶಗಳು

೧. ನವದೆಹಲಿಯಲ್ಲಿಂದು ಭಯೋತ್ಪಾದನೆ ವಿರುದ್ಧದ ಕ್ರಮಗಳ ಕುರಿತು ಪ್ರಧಾನಿ ನರೇಂದ್ರ ಮೋದಿ - ರಕ್ಷಣಾ ಸಚಿವ ರಾಜನಾಥ್ ಸಿಂಗ್ ಚರ್ಚೆ

೨. ಜಮ್ಮು-ಕಾಶ್ಮೀರದ ವಿಧಾನಸಭೆಯಲ್ಲಿಂದು ಪಹಲ್ಗಾಮ್ ಭಯೋತ್ಪಾದನಾ ದಾಳಿ ಕುರಿತು ಖಂಡನಾ ನಿರ್ಣಯ

೩. ೨೬ ರಫೇಲ್ ನೌಕಾ ಯುದ್ಧ ವಿಮಾನಗಳ ಖರೀದಿಯ ರಕ್ಷಣಾ ಒಪ್ಪಂದಕ್ಕೆ ಇಂದು ಭಾರತ-ಫ್ರಾನ್ಸ್ ನಡುವೆ ಸಹಿ

೪. ೧೭ ವರ್ಷದೊಳಗಿನವರ ಏಷ್ಯನ್ ಬಾಕ್ಸಿಂಗ್ ಚಾಂಪಿಯನ್ ಶಿಪ್ ; ೯ನೇ ದಿನ ೭ ಭಾರತೀಯರು ಫೈನಲ್‌ಗೆ ಲಗ್ಗೆ

೫. ಐಪಿಎಲ್ ಟಿ-೨೦ ಕ್ರಿಕೆಟ್ ; ಜೈಪುರದಲ್ಲಿಂದು ರಾಜಸ್ಥಾನ್ ರಾಯಲ್ಸ್-ಗುಜರಾತ್ ಟೈಟಾನ್ಸ್ ಮುಖಾಮುಖಿ

**<><*<><>*><>**

ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಂದು ಪ್ರಧಾನಿ ನರೇಂದ್ರ ಮೋದಿ ಅವರನ್ನು ನವದೆಹಲಿಯಲ್ಲಿರುವ ಅವರ ಅಧಿಕೃತ ನಿವಾಸದಲ್ಲಿ ಭೇಟಿಯಾಗಿ ಮಾತುಕತೆ ನಡೆಸಿದರು. ಪಹಲ್ಗಾಮ್ ಭಯೋತ್ಪಾದಕ ದಾಳಿ ಹಾಗೂ ಬಳಿಕ ಕೈಗೊಂಡಿರುವ ಕ್ರಮಗಳ ಬೆನ್ನಲ್ಲೆ ನಡೆದ ಈ ಸಭೆ ४० ನಿಮಿಷಗಳ ಕಾಲ ನಡೆಯಿತು ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ನಿನ್ನೆ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಸಿಡಿಎಸ್ ಜನರಲ್ ಅನಿಲ್ ಚೌವ್ಹಾಣ್ ರಾಜನಾಥ್ ಸಿಂಗ್ ಅವರನ್ನು ಭೇಟಿಯಾಗಿ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಮಿಲಿಟರಿ ಕೈಗೊಂಡಿರುವ ಪ್ರಮುಖ ಕ್ರಮಗಳ ಕುರಿತು ಸಮಾಲೋಚನೆ ನಡೆಸಿದರು.

**<><*<><>*><>**

ಜಮ್ಮು-ಕಾಶ್ಮೀರ ವಿಧಾನಸಭೆಯಲ್ಲಿಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಸಾವನ್ನಪ್ಪಿದ ೨೬ ಜನರಿಗೆ ಶ್ರದ್ಧಾಂಜಲಿ ಸಲ್ಲಿಸಿ ೨ ನಿಮಿಷಗಳ ಕಾಲ ಮೌನವನ್ನು ಆಚರಿಸಲಾಯಿತು. ವಿಧಾನಸಭಾಧ್ಯಕ್ಷ ಅಬ್ದುಲ್ ರಹೀಮ್ ರಾಥರ್, ದೇಶದ ವಿವಿಧ ಭಾಗಗಳಿಂದ ಬಂದಿದ್ದ ಅಮಾಯಕ ಪ್ರವಾಸಿಗರನ್ನು ಸಾವಿಗೆ ಕಾರಣವಾದ ಈ ಘಟನೆಯನ್ನು ತೀವ್ರವಾಗಿ ಖಂಡಿಸಿದ್ದಾರೆ. ಇದೇ ವೇಳೆ ಪ್ರವಾಸಿಗರ ಮೇಲಿನ ಅನಾಗರಿಕ ಮತ್ತು ಅಮಾನವೀಯ ದಾಳಿಗೆ ತೀವ್ರ ಆಘಾತ ಮತ್ತು ದುಃಖ ವ್ಯಕ್ತಪಡಿಸಿ, ಉಪಮುಖ್ಯಮಂತ್ರಿ ಸುಧೀಂದ್ರ ಚೌಧರಿ ಸರ್ಕಾರದ ಪರವಾಗಿ ಪಹಲ್ಗಾಮ್ ಭಯೋತ್ಪಾದನಾ ದಾಳಿ ಕುರಿತು ಖಂಡನಾ ನಿರ್ಣಯವನ್ನು ಮಂಡಿಸಿದರು.

<><*<><>*><>

ಪಹಲ್ಗಾಮ್ ಭಯೋತ್ಪಾದಕ ದಾಳಿ ಬೆನ್ನಲ್ಲೆ ಭಾರತದ ವಿರುದ್ಧ ತಪ್ಪು ಮಾಹಿತಿಯನ್ನು ಪ್ರಸಾರ ಮಾಡುತ್ತಿದ್ದ ಡಾನ್ ನ್ಯೂಸ್, ಸಮಾ ಟಿವಿ, ಅರಿ ನ್ಯೂಸ್ ಮತ್ತು ಜಿಯೊ ನ್ಯೂಸ್ ಸೇರಿದಂತೆ ಒಟ್ಟು ೧೬ ಪಾಕಿಸ್ತಾನಿ ಯೂಟ್ಯೂಬ್ ಚಾನಲ್‌ಗಳನ್ನು ಕೇಂದ್ರ ಗೃಹ ಸಚಿವಾಲಯದ ನಿರ್ದೇಶನದಂತೆ ನಿಷೇಧಿಸಲಾಗಿದೆ. ಈ ನಿಷೇಧಿತ ಚಾನಲ್‌ಗಳು ೬೩ ದಶಲಕ್ಷಕ್ಕೂ ಅಧಿಕ ಚಂದಾದರರನ್ನು ಹೊಂದಿದ್ದವು. ಈ ನಡುವೆ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಗ್ಗೆ ಬ್ರಿಟಿಷ್ ಬ್ರಾಡ್‌ಕಾಸ್ಟಿಂಗ್ ಕಾರ್ಪೋರೇಷನ್ - ಬಿಬಿಸಿಯ ವರದಿ ಕುರಿತು ಆಕ್ಷೇಪ ವ್ಯಕ್ತಪಡಿಸಿರುವ ಕೇಂದ್ರ ಸರ್ಕಾರ ಭಾರತದ ಬಿಬಿಸಿ ಮುಖ್ಯಸ್ಥರಿಗೆ ಈ ಘಟನೆ ಕುರಿತ ದೇಶದ ಭಾವನೆಯನ್ನು ತಿಳಿಸಿದೆ. ಭಯೋತ್ಪಾದಕರನ್ನು ಮಿಲಿಟಂಟ್ಸ್ ಎಂದು ವರದಿ ಮಾಡಿದ್ದಕ್ಕೆ ಸರ್ಕಾರ ಬಿಬಿಸಿಗೆ ಅಧಿಕೃತ ಪತ್ರದ ಮೂಲಕ ಆಕ್ಷೇಪ ವ್ಯಕ್ತಪಡಿಸಿದೆ. ವಿದೇಶಾಂಗ ಸಚಿವಾಲಯ ಬಿಬಿಸಿ ವರದಿಯ ಮೇಲ್ವಿಚಾರಣೆ ನಡೆಸಲಿದೆ.

<><*<><>*><>

ಕಾಶ್ಮೀರ ವಿಚಾರಕ್ಕೆ ಸಂಬಂಧಿಸಿದಂತೆ ಭಾರತ ಹಾಗೂ ಪಾಕಿಸ್ತಾನದ ನಡುವೆ ಶಾಂತಿಯುತ ಪರಿಹಾರಕ್ಕೆ ತನ್ನ ಬೆಂಬಲವಿದೆ ಎಂದು ಬಾಂಗ್ಲಾದೇಶ ತಿಳಿಸಿದೆ. ದಕ್ಷಿಣ ಏಷ್ಯಾದಾದ್ಯಂತ ಶಾಂತಿ ಮತ್ತು ಸ್ಥಿರತೆಯನ್ನು ಖಚಿತಪಡಿಸಿಕೊಳ್ಳಲು ಸಂವಾದ ಮತ್ತು ರಾಜತಾಂತ್ರಿಕತೆಗೆ ಒತ್ತು ನೀಡುವ ಅಗತ್ಯವಿದೆ ಎಂದು ಬಾಂಗ್ಲಾದೇಶ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಸಲಹೆಗಾರ ತೌಹಿದ್ ಹೊಸೇನ್ ಹೇಳಿದ್ದಾರೆ. ಧಾಕಾದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಾಂಗ್ಲಾದೇಶದ ನಿಲುವು ಸ್ಪಷ್ಟವಾಗಿದ್ದು, ತಾವು ದಕ್ಷಿಣ ಏಷ್ಯಾದಾದ್ಯಂತ ಶಾಂತಿಯನ್ನು ಬಯಸುತ್ತೇವೆ. ಭಾರತ ಹಾಗೂ ಪಾಕಿಸ್ತಾನ ತಮ್ಮ ನಡುವಿನ ಭಿನ್ನಾಭಿಪ್ರಾಯಗಳನ್ನು ಸಂವಾದ ಹಾಗೂ ಸಮಾಲೋಚನೆ ಮೂಲಕ ಪರಿಹರಿಸಿಕೊಳ್ಳುವ ನಿರೀಕ್ಷೆಯನ್ನು ವ್ಯಕ್ತಪಡಿಸಿದ್ದಾರೆ. ಕೆಲವು ರಾಷ್ಟ್ರಗಳು ಈಗಾಗಲೇ ಮಧ್ಯಸ್ಥಿಕೆ ವಹಿಸುವ ಪ್ರಸ್ತಾಪಗಳನ್ನು ಉಭಯ ರಾಷ್ಟ್ರಗಳ ಮುಂದಿಟ್ಟಿವೆ.

ಯಾವುದೇ ಮಾರ್ಗದಿಂದಾದರೂ ಉದ್ವಿಗ್ನತೆ ಕಡಿಮೆಗೊಂಡು ಶಾಂತಿಯ ಸ್ಥಾಪನೆಯನ್ನು ತಾವು ಬಯಸುವುದಾಗಿ ತಿಳಿಸಿದ್ದಾರೆ.

<><*<><>*><>

೨೬ ರಫೇಲ್ ನೌಕಾ ಯುದ್ಧ ವಿಮಾನಗಳ ಖರೀದಿಯ ರಕ್ಷಣಾ ಒಪ್ಪಂದಕ್ಕೆ ಇಂದು ಮಧ್ಯಾಹ್ನ ಭಾರತ ಹಾಗೂ ಫ್ರಾನ್ಸ್ ನಡುವೆ ಸಹಿ ಹಾಕಲಾಗುವುದು. ಭಾರತದ ಪರವಾಗಿ ರಕ್ಷಣಾ ಸಚಿವಾಲಯದ ಅಧಿಕಾರಿಗಳು ಹಾಗೂ ಫ್ರಾನ್ಸ್‌ನ ಪರವಾಗಿ ಭಾರತದಲ್ಲಿನ ಫ್ರಾನ್ಸ್ ರಾಯಭಾರಿ ಒಪ್ಪಂದಕ್ಕೆ ಸಹಿ ಹಾಕಲಿದ್ದಾರೆ. ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಅವರು, ಭಾರತೀಯ ತಂಡವನ್ನು ಪ್ರತಿನಿಧಿಸುವ ನಿರೀಕ್ಷೆಯಿದೆ. ೨೬ ರಫೇಲ್ ನೌಕಾ ಯುದ್ಧ ವಿಮಾನಗಳಲ್ಲಿ ೨೨ ಸಿಂಗಲ್ ಸೀಟರ್ ಮತ್ತು ನಾಲ್ಕು ಡಬಲ್ ಸೀಟರ್ ಆಗಿರುತ್ತವೆ ಮತ್ತು ಇವುಗಳನ್ನು ಭಾರತೀಯ ನೌಕಾಪಡೆಯ ಅವಶ್ಯಕತೆಗೆ ಅನುಗುಣವಾಗಿ ವಿನ್ಯಾಸಗೊಳಿಸಿ, ಸಿದ್ಧಪಡಿಸಲಾಗುತ್ತದೆ. ನೌಕಾ ಯುದ್ಧ ವಿಮಾನಗಳ ಸೇರ್ಪಡೆಯೊಂದಿಗೆ, ನೌಕಾಪಡೆಯ ಸಾಮರ್ಥ್ಯ ಹೆಚ್ಚಲಿದೆ, ಈ ಯುದ್ಧ ವಿಮಾನಗಳನ್ನು ಐಎನ್ಎಸ್ ವಿಕ್ರಮಾದಿತ್ಯ ಮತ್ತು ಐಎನ್ಎಸ್ ವಿಕ್ರಾಂತ್ ನಂತಹ ವಿಮಾನವಾಹಕ ನೌಕೆಗಳಲ್ಲಿ ನಿಯೋಜಿಸಲಾಗುತ್ತದೆ. ಸುಧಾರಿತ ಶಸ್ತ್ರಾಸ್ತ್ರ ವ್ಯವಸ್ಥೆಗಳು ಮತ್ತು ಕ್ಷಿಪಣಿಗಳನ್ನು ರಫೇಲ್ ಹೊಂದಿದೆ.

<><*<><>*><>

ರಾಷ್ಟ್ರಪತಿ ಭವನದಲ್ಲಿ ನಡೆಯಲಿರುವ ಮೊದಲ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿಂದು ಸಂಜೆ ರಾಷ್ಟ್ರಪತಿ ದ್ರೌಪದಿ ಮುರ್ಮು ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಒಂದಾದ ಪದ್ಮ ಪ್ರಶಸ್ತಿಗಳನ್ನು ಪದ್ಮವಿಭೂಷಣ, ಪದ್ಮಭೂಷಣ ಮತ್ತು ಪದ್ಮಶ್ರೀ ಎಂಬ ಮೂರು ವಿಭಾಗಗಳಲ್ಲಿ ನೀಡಲಾಗುತ್ತದೆ. ಕಲೆ, ಸಮಾಜ ಸೇವೆ, ಸಾರ್ವಜನಿಕ ವ್ಯವಹಾರಗಳು, ವಿಜ್ಞಾನ ಮತ್ತು ಎಂಜಿನಿಯರಿಂಗ್, ವ್ಯಾಪಾರ ಮತ್ತು ಕೈಗಾರಿಕೆ, ವೈದ್ಯಕೀಯ, ಸಾಹಿತ್ಯ ಮತ್ತು ಶಿಕ್ಷಣ, ಕ್ರೀಡೆ ಮತ್ತು ನಾಗರಿಕ ಸೇವೆ ಸೇರಿದಂತೆ ವಿವಿಧ ವಿಭಾಗಗಳು ಮತ್ತು ಚಟುವಟಿಕೆಗಳ ಕ್ಷೇತ್ರಗಳಲ್ಲಿ ಪ್ರಶಸ್ತಿಗಳನ್ನು ನೀಡಲಾಗುತ್ತದೆ. ಈ ವರ್ಷದ ಗಣರಾಜ್ಯೋತ್ಸವದ ಮುನ್ನಾದಿನದಂದು, ಸರ್ಕಾರವು ಏಳು ಪದ್ಮವಿಭೂಷಣ, ೧೯ ಪದ್ಮಭೂಷಣ ಮತ್ತು ೧೧೩ ಪದ್ಮಶ್ರೀ ಪ್ರಶಸ್ತಿಗಳನ್ನು ಒಳಗೊಂಡ ೧೩೯ ಪದ್ಮ ಪ್ರಶಸ್ತಿಗಳನ್ನು ಘೋಷಿಸಿತ್ತು. ಪಿಟೀಲು ವಾದಕ ಮತ್ತು ಸಂಯೋಜಕ ಡಾ. ಎಲ್. ಸುಬ್ರಮಣಿಯಂ ಮತ್ತು ಗ್ಯಾಸ್ಟ್ರೋಎಂಟರಾಲಜಿಸ್ಟ್ ಡಿ. ನಾಗೇಶ್ವರ ರೆಡ್ಡಿ. ಪ್ರಮುಖ ಪದ್ಮವಿಭೂಷಣ ಪ್ರಶಸ್ತಿ ಪುರಸ್ಕೃತರಾಗಿದ್ದರೆ, ಖ್ಯಾತ ಸಂಪಾದಕ ಮತ್ತು ಪ್ರಸಾರ ಭಾರತಿ ಅಧ್ಯಕ್ಷ ಎ. ಸೂರ್ಯ ಪ್ರಕಾಶ್,

ಚಲನಚಿತ್ರ ನಟರಾದ ಅನಂತ್ ನಾಗ್, ನಂದಮೂರಿ ಬಾಲಕೃಷ್ಣ ಮತ್ತು ಎಸ್. ಅಜಿತ್ ಕುಮಾರ್, ಭರತನಾಟ್ಯ ನೃತ್ಯಗಾರ್ತಿ ಶೋಭನಾ ಚಂದ್ರಕುಮಾರ್ ಮತ್ತು ಮಾಜಿ ಭಾರತೀಯ ಹಾಕಿ ತಂಡದ ನಾಯಕ ಪಿ. ಆರ್. ಶ್ರೀಜೇಶ್ ಪದ್ಮಭೂಷಣ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ.

<><*<><>*><>

ದೊಡ್ಡ ಪ್ರಮಾಣದ ಚಿಕಿತ್ಸಾ ಕೇಂದ್ರಗಳ ಸ್ಥಾಪನೆ ಮತ್ತು ತ್ವರಿತ ರೋಗ ನಿರ್ಣಯಕ್ಕೆ ಉತ್ತೇಜನ ನೀಡುವ ಮೂಲಕ ಭಾರತ ಕ್ಯಾನ್ಸರ್ ಚಿಕಿತ್ಸೆಯಲ್ಲಿ ಪ್ರಗತಿ ಸಾಧಿಸುತ್ತಿದೆ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಹೇಳಿದ್ದಾರೆ.  ಮಹಾರಾಷ್ಟ್ರದ ಛತ್ರಪತಿ ಸಾಂಭಾಜಿ ನಗರದಲ್ಲಿರುವ ಸರ್ಕಾರಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ವಿಸ್ತೃತ ಕ್ಯಾನ್ಸರ್ ಸಂಸ್ಥೆ ಮತ್ತು ಅತ್ಯಾಧುನಿಕ ಟ್ರೂ ಬೀಮ್ ಘಟಕದ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ವೈದ್ಯಕೀಯ ಸಂಚಿಕೆ ದಿ ಲ್ಯಾನ್ಸೆಟ್ ನ ವರದಿಯನ್ನು ಉಲ್ಲೇಖಿಸಿದ ಅವರು, ಸರ್ಕಾರದ ಕ್ರಮಗಳಿಂದಾಗಿ ಶೇಕಡ ೯೦ರಷ್ಟು ಕ್ಯಾನ್ಸರ್ ರೋಗಿಗಳು ರೋಗ ನಿರ್ಣಯದ ಕೇವಲ ೩೦ ದಿನಗಳಲ್ಲಿ ತಮ್ಮ ಚಿಕಿತ್ಸೆಯನ್ನು ಪ್ರಾರಂಭಿಸುತ್ತಿದ್ದಾರೆ ಎಂದು ಹೇಳಿದರು.

ಧ್ವನಿ : ಜೆ.ಪಿ. ನಡ್ಡಾ (೨೧ ಸೆಕೆಂಡ್‌ಗಳು)

<><*<><>*><>

ನವದೆಹಲಿಯಲ್ಲಿಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಮತ್ತು ದೆಹಲಿ ಮುಖ್ಯಮಂತ್ರಿ ರೇಖಾಗುಪ್ತಾ ದೆಹಲಿ ನಿವಾಸಿಗಳಿಗಾಗಿ ಇಂದು ಆಯುಷ್ಮಾನ್ ವಯ್ ವಂದನ್ ಯೋಜನೆಗೆ ಚಾಲನೆ ನೀಡಿದರು. ಈ ಯೋಜನೆ ಎಲ್ಲ ೭೦ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ೫ ಲಕ್ಷ ರೂಪಾಯಿವರೆಗಿನ ಆರೋಗ್ಯ ಸೌಲಭ್ಯ ಒದಗಿಸಲಿದೆ. ಕಾರ್ಯಕ್ರಮದಲ್ಲಿ ಸಂಸದರು ಹಾಗೂ ದೆಹಲಿ ಸಚಿವ ಸಂಪುಟ ಸದಸ್ಯರು ಪಾಲ್ಗೊಂಡಿದ್ದರು. ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆಯಡಿ ಈಗಾಗಲೇ ಸೌಲಭ್ಯ ಪಡೆಯುತ್ತಿರುವ ೭೦ ವರ್ಷ ಹಾಗೂ ಅದಕ್ಕಿಂತ ಮೇಲ್ಪಟ್ಟ ಹಿರಿಯ ನಾಗರಿಕರಿಗೂ ವಯ್ ವಂದನಾ ಯೋಜನೆಯಡಿ ಹೆಚ್ಚುವರಿ ೫ ಲಕ್ಷ ರೂಪಾಯಿವರೆಗಿನ ಆರೋಗ್ಯ ಸೌಲಭ್ಯ ದೊರೆಯಲಿದೆ.

<><*<><>*><>

ಮಧ್ಯಪ್ರದೇಶದ ಭೋಪಾಲ್, ಇಂದೋರ್ ಮತ್ತು ಮಂದ್ಸೋರ್ ನಲ್ಲಿರುವ ಮದ್ಯ ಗುತ್ತಿಗೆದಾರರ ೧೧ ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯ ಇಡಿ ದಾಳಿ ನಡೆಸಿದೆ. ೨೦೧೫ ಮತ್ತು ೨೦೧೮ರ ನಡುವೆ ಖಜಾನೆಯ ಚಲನಗಳ ನಕಲಿ ಮತ್ತು ಅಕ್ರಮ ನಿರ್ವಹಣೆಯ ಮೂಲಕ ಸರ್ಕಾರದ ಆದಾಯಕ್ಕೆ ೪೯

ಕೋಟಿ ರೂಪಾಯಿಗಳು ನಷ್ಟವಾಗಿದೆ ಎಂದು ಆರೋಪಿಸಿ ದಾಖಲಾಗಿರುವ ಎಫ್‌ಐಆರ್ ಬೆನ್ನಲ್ಲೆ ಈ ಶೋಧ ಕಾರ್ಯಾಚರಣೆ ನಡಸಲಾಗಿದೆ. ಗುತ್ತಿಗೆದಾರರು ಸಣ್ಣ ಮೊತ್ತದ ಚಲನ್‌ಗಳ ತಯಾರಿಸಿ ಮೊತ್ತವನ್ನು ಅಕ್ಷರದಲ್ಲಿ ಬರೆಯುವ ಜಾಗದಲ್ಲಿ ಸ್ವಲ್ಪ ಜಾಗವನ್ನು ಬಿಟ್ಟು ನಂತರ ಹೆಚ್ಚಿನ ಮೊತ್ತವನ್ನು ಭರ್ತಿ ಮಾಡಿ ಬದಲಿಸಿದ ನಕಲಿ ಪ್ರತಿಗಳನ್ನು ಗೋದಾಮು ಮತ್ತು ಅಬಕಾರಿ ಕಚೇರಿಗಳಿಗೆ ಸಲ್ಲಿಸಿದ್ದಾರೆ ಎಂದು ಆರಂಭಿಕ ತನಿಖೆಗಳು ಬಹಿರಂಗ ಪಡಿಸಿವೆ. ಹಗರಣದ ವ್ಯಾಪ್ತಿಯನ್ನು ಮತ್ತು ಭಾಗಿಯಾಗಿರುವವರನ್ನು ಪತ್ತೆ ಹಚ್ಚಲು ಇಡಿ ತೀವ್ರ ತನಿಖೆ ಕೈಗೊಂಡಿದೆ.

<><*<><>*><>

ಜಾರ್ಡನ್‌ನ ಅಮ್ಮಾನ್‌ನಲ್ಲಿ ನಡೆಯುತ್ತಿರುವ ೧೫ ಹಾಗೂ ೧೭ ವರ್ಷದೊಳಗಿನವರ ಏಷ್ಯನ್ ಬಾಕ್ಸಿಂಗ್ ಚಾಂಪಿಯನ್ ಶಿಪ್‌ನ ೯ನೇ ದಿನದಂದು ಭಾರತ ಉತ್ತಮ ಪ್ರದರ್ಶನ ಮುಂದುವರೆಸಿದ್ದು, ೧೭ ವರ್ಷದೊಳಗಿನವರ ಚಾಂಪಿಯನ್ ಶಿಪ್‌ನಲ್ಲಿ ೭ ಭಾರತೀಯ ಬಾಕ್ಸರ್‌ಗಳು ಫೈನಲ್ ಪ್ರವೇಶಿಸಿದ್ದಾರೆ. ಆ ಮೂಲಕ ೧೫ ಹಾಗೂ ೧೭ ವರ್ಷದೊಳಗಿನವರ ವಿಭಾಗದಲ್ಲಿ ಭಾರತದ ಒಟ್ಟು ೨೧ ಬಾಕ್ಸರ್‌ಗಳು ಚಿನ್ನದ ಪದಕಕ್ಕಾಗಿ ಸೆಣಸಾಟ ನಡೆಸಲಿದ್ದಾರೆ. ೯ನೇ ದಿನ ೧೭ ವರ್ಷದೊಳಗಿನವರ ವಿಭಾಗದಲ್ಲಿ ಮಹಿಳಾ ಬಾಕ್ಸರ್‌ಗಳಾದ ಅಹಾನಾ ಶರ್ಮ, ಖುಷಿ ಚೆಂದ್, ಜನ್ನತ್, ಸಿಮ್ರನ್‌ಜೀತ್ ಕೌರ್, ಹರ್ಸಿಕಾ ಮತ್ತು ಅನ್ಷಿಕಾ ಗೆಲುವು ಸಾಧಿಸಿ ಫೈನಲ್ ಪ್ರವೇಶಿಸಿದ್ದಾರೆ. ಪುರುಷರ ೧೭ ವರ್ಷದೊಳಗಿನವರ ವಿಭಾಗದಲ್ಲಿ ದೇವಾಂಷ್ ೮೦ ಕೆ.ಜಿ. ವಿಭಾಗದಲ್ಲಿ ಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ.

<><*<><>*><>

ಜೈಪುರದ ಸ್ವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಜಸ್ಥಾನ ರಾಯಲ್ಸ್ ಹಾಗೂ ಗುಜರಾತ್ ಟೈಟಾನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ ಕ್ಕೆ ಆರಂಭವಾಗಲಿದೆ.. ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ೬ ವಿಕೆಟ್‌ಗಳಿಂದ ಸೋಲಿಸಿದೆ. ಆ ಮೂಲಕ ೧೪ ಅಂಕ ಪಡೆದ ಮೊದಲ ತಂಡವಾಗಿ ಅಂಕಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ <>*><>